Akashvani : Bangalore
Regional Bulletin In Kannada
08.10.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ರಾಜಕೀಯ ದಾಳವಾಗಿ ಜಾತಿಗಣತಿ ವರದಿ ಬಳಕೆ ಬೇಡ-ವಿರೋಧ ಪಕ್ಷದ ನಾಯಕ ಆರ್.ಅಶೋಕ

- ನವಲಿ ಸಮಾನಾಂತರ ಜಲಾಶಯ ನಿರ್ಮಾಣ ಸಂಬಂಧ ಆಂಧ್ರಪ್ರದೇಶ, ತೆಲಂಗಾಣ ಮುಖ್ಯಮಂತ್ರಿಗಳ ಜೊತೆಗೆ ಶೀಘ್ರ ಚರ್ಚೆ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

- ಏWIಓ ಸಿಟಿಯಲ್ಲಿ ಉನ್ನತ ಶಿಕ್ಷಣ ಸಂಸ್ಥೆ ಸ್ಥಾಪಿಸಲು ಅಮೆರಿಕದ ಶೈಕ್ಷಣಿಕ ಸಂಸ್ಥೆಗಳು ಉತ್ಸುಕವಾಗಿವೆ - ಸಚಿವ ಎಂ.ಬಿ.ಪಾಟೀಲ್

- ಕಿತ್ತೂರಿನ ಸ್ಮಾರಕಗಳ ಸಂರಕ್ಷಣೆ, ಅಭಿವೃದ್ಧಿಗಾಗಿ ೬೦ ಕೋಟಿ ರೂಪಾಯಿಗಳ ಅನುದಾನ ಮಂಜೂರು-ಸಚಿವ ಕೃಷ್ಣ ಭೈರೇಗೌಡ

<><*<><>*><>

ಜಾತಿಗಣತಿ ವರದಿ ಬಗ್ಗೆ ಬಿಜೆಪಿಯಿಂದ ಯಾವ ತಕರಾರು ಇಲ ಆದರೆ ರಾಜಕೀಯ ಚದುರಂಗದಾಟದಲ್ಲಿ ಜಾತಿ ಜನಗಣತಿಯನ್ನು ದಾಳವಾಗಿ ಬಳಸಿಕೊಳ್ಳುವುದಕ್ಕೆ ನಮ್ಮ ವಿರೋಧವಿದೆ ಎಂದು ವಿಧಾನಸಭೆ ವಿರೋಧ ಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನಿಜವಾಗಿಯೂ ಜಾತಿಗಣತಿಯ ಬಗ್ಗೆ ಬದ್ಧತೆ ಇದ್ದಿದ್ದರೆ, ೨೦೧೮ರಲ್ಲೇ ಕಾಂತರಾಜು ವರದಿಯನ್ನು ಸ್ವೀಕರಿಸಿ, ಏಕೆ ಜಾರಿ ಮಾಡಲಿಲ್ಲ ಎಂದು ಅವರು ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಪ್ರಶ್ನಿಸಿದ್ದಾರೆ. ಹತ್ತು ವರ್ಷಗಳ ಹಿಂದೆ ಕೈಗೊಂಡ ಜಾತಿ ಜನಗಣತಿ ವೈಜ್ಞಾನಿಕವಾಗಿ ನಡೆದಿಲ್ಲ. ಅನೇಕ ಜನರ ಮನೆಗಳಿಗೆ ಭೇಟಿಯೇ ನೀಡಿಲ್ಲ ಎಂಬ ದೂರುಗಳಿವೆ. ಹೀಗಿರುವಾಗ ಈ ವರದಿಯನ್ನು ಜಾರಿಗೆ ತರುವ ತರಾತುರಿ ಏಕೆ?. ಕಾಂಗ್ರೆಸ್ ಪಕ್ಷದ ನಾಯಕರೇ ಈ ಜಾತಿಗಣತಿ ವರದಿಗೆ ವಿರೋಧ ವ್ಯಕ್ತಪಡಿಸಿದ್ದಾರೆ ಎಂದು ಆರ್.ಅಶೋಕ ಹೇಳಿದರು.

<><*<><>*><>

ಮುಡಾ ಹಗರಣದ ತನಿಖೆಗೆ ಒಳಪಟ್ಟಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ರಾಜೀನಾಮೆ ಕೂಡಲೇ ರಾಜೀನಾಮೆ ನೀಡಿ, ತಮ್ಮ ಗೌರವ ಉಳಿಸಿಕೊಳ್ಳಲಿ ಎಂದು ಉತ್ತರ ಕನ್ನಡ ಸಂಸದ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆಗ್ರಹಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಕಚೇರಿಯಲ್ಲಿಂದು ನವೀಕೃತ ಸಂಸದರ ಕಚೇರಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವರು, ಅಧಿಕಾರದಲ್ಲಿ ಮುಂದುವರಿದರೆ ತನಿಖೆ ಮೇಲೆ ಒತ್ತಡ ಬೀರಲಿದೆ. ಸೂಕ್ತ ರೀತಿಯಲ್ಲಿ ರೀತಿಯಲ್ಲಿ ತನಿಖೆಯಾಗಲು ಸಿದ್ದರಾಮಯ್ಯನವರು ತಮ್ಮ ಹುದ್ದೆ ತೊರೆಯಬೇಕು ಎಂದು ತೊರೆಯಬೇಕು ಎಂದು ಒತ್ತಾಯಿಸಿದರು. ಇನ್ನೊಂದೆಡೆ, ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ರಾಜ್ಯ

ವಿಚಾರದಲ್ಲಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ತನ್ನ ಸ್ಪಷ್ಟ ನಿಲುವು ತಿಳಿಸಬೇಕು. ಜನರಿಗೆ ತಿಳಿಸಬೇಕು. ಜನರಿಗೆ ತೊಂದರೆಯಾಗದಂತೆ ವರದಿ ಜಾರಿಗೆ ಕೇಂದ್ರದ ಮಟ್ಟದಲ್ಲಿ ರಾಜ್ಯದ ಸಂಸದರು ರಾಜ್ಯದ ಸಂಸದರು ಪ್ರಯತ್ನಿಸುವುದಾಗಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಹೇಳಿದರು.

<><*<><>*><>

ಜಾತಿಗಣತಿ ವರದಿಯನ್ನು ಜಾರಿಗೊಳಿಸಲು ಮುಂದಾಗಿರುವುದು ವಿಪಕ್ಷದವರಿಗೆ ನುಂಗಲಾರದ ತುತ್ತಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದುಳಿದವರು, ದಲಿತರು, ಅಲ್ಪಸಂಖ್ಯಾತರ ಸಂಖ್ಯೆ ಅಧಿಕವಾಗಿದೆ ಎಂದು ಎಲ್ಲರಿಗೂ ತಿಳಿದಿದೆ. ಜಾತಿ ಗಣತಿ ಆಧಾರದ ಮೇಲೆ ಮುಂಬರುವ ದಿನಗಳಲ್ಲಿ ಕಾರ್ಯಕ್ರಮ ರೂಪಿಸಲು ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ. ಇದೇ ೧೮ರಂದು ಜಾತಿಗಣತಿ ವರದಿಯನ್ನು ಸಚಿವ ಸಂಪುಟದ ಮುಂದೆ ಚರ್ಚೆಗೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದ್ದಾರೆ. ಉಪಸಮಿತಿ ರಚಿಸುವುದು ಅಥವಾ ವಿಧಾನಸಭೆ ಅಧಿವೇಶನದಲ್ಲಿ ಮಂಡಿಸಬೇಕಾ ಎಂಬುದನ್ನು ತೀರ್ಮಾನ ಮಾಡಲಾಗುತ್ತದೆ. ವಸ್ತುಸ್ಥಿತಿಯನ್ನು ಜನಗಳ ಮುಂದೆ ಇಡಲಾಗುವುದು ಎಂದರು. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ಅಗತ್ಯ ಇಲ್ಲ ಎಂದು. ಪರಮೇಶ್ವರ್ ಸ್ಪಷ್ಟಪಡಿಸಿದರು.

**ಧ್ವನಿ : ಡಾ. ಜಿ. ಪರಮೇಶ್ವರ್**

<><*<><>*><>

ತುಂಗಭದ್ರಾ ಜಲಾಶಯದಲ್ಲಿ ಹೂಳು ತುಂಬಿ, ಸುಮಾರು ೩೩ ಟಿಎಂಸಿ ನೀರಿನ ಕೊರತೆ ಹಿನ್ನೆಲೆಯಲ್ಲಿ ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ಆಂಧ್ರಪ್ರದೇಶ, ತೆಲಂಗಾಣ ಮುಖ್ಯಮಂತ್ರಿಗಳ ಜೊತೆಗೆ ಶೀಘ್ರ ಚರ್ಚಿಸಲಾಗುವುದು ಎಂದು ಉಪಮುಖ್ಯಮಂತ್ರಿ, ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸಿಂಧನೂರು ನಗರದಲ್ಲಿಂದು ಸಿಂಧನೂರು ದಸರಾ ಉತ್ಸವದ ಅಂಗವಾಗಿ ರೈತ ದಸರಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತುಂಗಭದ್ರಾ ಆಣೆಕಟ್ಟು ನಿರ್ಮಾಣವಾಗಿ ೭೦ ವರ್ಷಗಳಾಗಿದ್ದು, ಇತ್ತೀಚೆಗೆ ಜಲಾಶಯದ ಒಂದು ಕ್ರೆಸ್ಟ್ ಗೇಟ್ ಕೊಚ್ಚಿ ಹೋಗಿತ್ತು. ಕೇವಲ ಒಂದೇ ವಾರದಲ್ಲಿ ಸ್ಟಾಪ್‌ಲಾಗ್ ಗೇಟ್ ಅಳವಡಿಸಿ ನೀರು ಉಳಿಸಲಾಯಿತು ಎಂದರು. ತುಂಗಭದ್ರಾ ಜಲಾಶಯ ಕ್ರೆಸ್ಟ್ ಗೇಟ್‌ಗಳ ಪರಿಶೀಲನೆಗೆ ತಾಂತ್ರಿಕ ಸಮಿತಿ ರಚಿಸಲಾಗಿದೆ. ಈ ಸಮಿತಿಯು ಈಗಾಗಲೇ ತನ್ನ ವರದಿ ಸಲ್ಲಿಸಿದೆ. ಜಲಾಶಯದಲ್ಲಿ ನೀರು ಕಡಿಮೆಯಾದ ನಂತರ ಕ್ರೆಸ್ಟ್ ಗೇಟ್ ಬದಲಿಸುವ ಕೆಲಸ ಆರಂಭಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ಎಸ್.ತಂಗಡಗಿ ಉಪಸ್ಥಿತರಿದ್ದರು.

<><*<><>*><>

ರಾಜ್ಯ ಸರ್ಕಾರ ಇತ್ತೀಚೆಗೆ ಆರಂಭಿಸಿರುವ ಜ್ಞಾನ, ಆರೋಗ್ಯ ಮತ್ತು ನಾವೀನ್ಯತೆಯ ಅತ್ಯಾಧುನಿಕ ನಗರ-ನಾವೀನ್ಯತೆಯ ಅತ್ಯಾಧುನಿಕ ನಗರ-ಕ್ವಿನ್ ಸಿಟಿ ಯೋಜನೆಯಡಿ ಅಮೆರಿಕದ ಪ್ರತಿಷ್ಠಿತ ಶೈಕ್ಷಣಿಕ ಪ್ರತಿಷ್ಠಿತ ಶೈಕ್ಷಣಿಕ ಸಂಸ್ಥೆಗಳು ಉನ್ನತ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಲು ತೀವ್ರ ಆಸಕ್ತಿ ತೋರಿಸಿವೆ

ತೀವ್ರ ಆಸಕ್ತಿ ತೋರಿಸಿವೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಮುಂದಿನ ವರ್ಷ ಮುಂದಿನ ವರ್ಷ ಬೆಂಗಳೂರಿನಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶಕ್ಕೆ ಸಮಾವೇಶಕ್ಕೆ ಹೂಡಿಕೆದಾರರನ್ನು ಆಕರ್ಷಿಸಲು ಅಮೆರಿಕದ ಅಧಿಕೃತ ಪ್ರವಾಸದಲ್ಲಿ ಇರುವ ಸಚಿವರು, ಇರುವ ಸಚಿವರು, ಜಾನ್ಸ್ ಹಾಪ್ಕಿನ್ಸ್ ವಿಶ್ವವಿದ್ಯಾಲಯ, ಕೇರ್ ಬಿಸಿನೆಸ್ ಸ್ಕೂಲ್ ಹಾಗೂ ಹಾಗೂ ಬ್ಲೂಮ್‌ಬರ್ಗ್ ಸ್ಕೂಲ್ ಆಫ್ ಪಬ್ಲಿಕ್ ಹೆಲ್ತ್ ಆಂಡ್ ಸ್ಕೂಲ್ ಆಫ್ ಮೆಡಿಸಿನ್‌ನ ಉನ್ನತ ಮೆಡಿಸಿನ್‌ನ ಉನ್ನತ ಅಧಿಕಾರಿಗಳ ಜೊತೆಗೆ ಮಾತುಕತೆ ನಡೆಸಿದ್ದಾರೆ. ಈ ಸಭೆಗಳಲ್ಲಿ ರಾಜ್ಯ ಸರ್ಕಾರ ರಾಜ್ಯ ಸರ್ಕಾರ ಮತ್ತು ರಾಜ್ಯದ ಶೈಕ್ಷಣಿಕ ಸಂಸ್ಥೆಗಳ ಜೊತೆಗಿನ ಪಾಲುದಾರಿಕೆ ಸಾಧ್ಯತೆಗಳನ್ನು ಸಾಧ್ಯತೆಗಳನ್ನು ಪ್ರಮುಖವಾಗಿ ಚರ್ಚಿಸಲಾಗಿದೆ. ಜಿಇ ಹೆಲ್ತ್‌ಕೇರ್, ಎಲ್-೩ ಹ್ಯಾರಿಸ್ ಟೆಕ್ನಾಲಜೀಸ್‌ನ ಹ್ಯಾರಿಸ್ ಟೆಕ್ನಾಲಜೀಸ್‌ನ ಉನ್ನತ ಪ್ರತಿನಿಧಿಗಳ ಜೊತೆಗೆ ನಡೆದ ಮಾತುಕತೆಗಳು ಆಶಾದಾಯಕವಾಗಿವೆ ಆಶಾದಾಯಕವಾಗಿವೆ ಎಂದು ಸಚಿವರು ತಿಳಿಸಿದ್ದಾರೆ. ಆರೋಗ್ಯ, ಬಾಹ್ಯಕಾಶ, ರಕ್ಷಣೆ ಮತ್ತು ಉನ್ನತ ರಕ್ಷಣೆ ಮತ್ತು ಉನ್ನತ ಶಿಕ್ಷಣದಂತಹ ಪ್ರಮುಖ ಕ್ಷೇತ್ರಗಳಲ್ಲಿ ಪಾಲುದಾರಿಕೆ ನಿಟ್ಟಿನಲ್ಲಿ ಅಮೆರಿಕದ ನಿಟ್ಟಿನಲ್ಲಿ ಅಮೆರಿಕದ ಪ್ರಮುಖ ಉದ್ಯಮಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಜೊತೆಗೆ ಸಚಿವರು ಜೊತೆಗೆ ಸಚಿವರು ಚರ್ಚಿಸಿದ್ದಾರೆ. ಇದೇ ವೇಳೆ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಸಮಾವೇಶದಲ್ಲಿ ಭಾಗವಹಿಸಲು ಅಧಿಕೃತ ಆಹ್ವಾನವನ್ನೂ ನೀಡಿದ್ದಾರೆ.

<><*<><>*><>

ಐತಿಹಾಸಿಕ ಕಿತ್ತೂರಿನ ಇತಿಹಾಸ ಹಾಗೂ ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ೬೦ ಕೋಟಿ ರೂಪಾಯಿಗಳ ಅನುದಾನ ಮಂಜೂರು ಮಾಡಿದ್ದಾರೆ ಎಂದು ಕಂದಾಯ ಇಲಾಖೆ ಸಚಿವ ಕೃಷ್ಣ ಭೈರೇಗೌಡ ತಿಳಿಸಿದ್ದಾರೆ.  ಕಿತ್ತೂರಿನಲ್ಲಿ ಇಂದು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,  ಅವಶೇಷಗಳ ಸ್ವರೂಪದಲ್ಲಿರುವ ಕಿತ್ತೂರು ಕೋಟೆ ಹಾಗೂ ಅರಮನೆಯ ಸಂರಕ್ಷಣೆಗೆ ಸರ್ಕಾರ ವಿಶೇಷ ಆದ್ಯತೆ ನೀಡಿ ಹೆಚ್ಚಿನ ಅನುದಾನ ನೀಡಿದೆ ಎಂದರು. ಕಿತ್ತೂರಿಗೆ ತನ್ನದೇ ಆದ ವಿಶಿಷ್ಟ ಇತಿಹಾಸವಿದೆ. ಈ ಇತಿಹಾಸವನ್ನು ಹೊಸ ತಲೆಮಾರಿಗೆ ಪರಿಚಯಿಸಲು ಹಾಗೂ ಕಿತ್ತೂರು ಕೋಟೆಯನ್ನು ಪ್ರವಾಸಿ ಕೇಂದ್ರವನ್ನಾಗಿಸುವ ದೃಷ್ಟಿಯಿಂದ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಐತಿಹಾಸಿಕ  ವಿಷಯಾಧಾರಿತ ಉದ್ಯಾನವನ ನಿರ್ಮಿಸಲಾಗುವುದು ಎಂದು ಮಾಹಿತಿ ನೀಡಿದರು. ೧೮೨೪ ರಲ್ಲಿ ಬ್ರಿಟೀಷರ ವಿರುದ್ಧದ ಹೋರಾಟದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಗೆಲುವು ಸಾಧಿಸಿದ್ದಾರೆ. ಇದರ ಸ್ಮರಣಾರ್ಥ ಪ್ರತಿವರ್ಷ ಕಿತ್ತೂರು ವಿಜಯೋತ್ಸವ ಆಚರಿಸಲಾಗುತ್ತದೆ. ಕಿತ್ತೂರು ವಿಜಯೋತ್ಸವಕ್ಕೆ ಇನ್ನೂರು ವರ್ಷ ಸಂದ ಹಿನ್ನಲೆಯಲ್ಲಿ ಈ ಬಾರಿ ಆಚರಣೆಗೆ ವಿಶೇಷ ಆದ್ಯತೆ ನೀಡಲಾಗಿದೆ. ಉತ್ಸವದ ಆರಚಣೆಗೆ ಈಗಾಗಲೇ ಸರ್ಕಾರ, ೫ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ಧ್ವನಿ: ಸಚಿವ ಕೃಷ್ಣ ಬೈರೇಗೌಡ

<><*<><>*><>

ಪೋಕ್ಸೋ ಕಾಯ್ದೆಯಡಿ ಆರೋಪ ಎದುರಿಸುತ್ತಿರುವ ನೃತ್ಯ ನಿರ್ದೇಶಕ ಜಾನಿ ಮಾಸ್ಟರ್ ಅವರಿಗೆ ಮಾಸ್ಟರ್ ಅವರಿಗೆ ನೀಡಲಾಗಿದ್ದ ಪ್ರಶಸ್ತಿಯನ್ನು ಕೇಂದ್ರ ಸರ್ಕಾರ ಹಿಂಪಡೆದ ನಿಲುವನ್ನು ರಾಜ್ಯ ನಿಲುವನ್ನು ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ವಾಗತಿಸಿದ್ದಾರೆ. ಬೆಂಗಳೂರಿನಲ್ಲಿಂದು ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರ ಮೇಲೆ ದೌರ್ಜನ್ಯ

ದೌರ್ಜನ್ಯ ಎಸಗುವವರ ವಿರುದ್ಧ ಸಹನೆ ಇಟ್ಟುಕೊಳ್ಳಬಾರದು. ಅಂತಹವರ ವಿರುದ್ಧ ಸಾಧ್ಯವಾದಷ್ಟು ಹೆಚ್ಚಿನ ಕಠಿಣ ನಿರ್ಧಾರ ಕೈಗೊಳ್ಳಬೇಕು ಎಂದರು. ಸಾರ್ವಜನಿಕ ಕ್ಷೇತ್ರ, ಉದ್ಯಮ ಕ್ಷೇತ್ರ, ಉದ್ಯಮ ಹಾಗೂ ವ್ಯಾಪಾರದಲ್ಲಿ ಮಹಿಳೆಯರ ಪಾತ್ರ ಹೆಚ್ಚುತ್ತಿರುವ ಸಂದರ್ಭದಲ್ಲಿ ಅವರಿಗೆ ಸಂದರ್ಭದಲ್ಲಿ ಅವರಿಗೆ ಮುಜುಗರ ಹಾಗೂ ತೊಂದರೆಯಾಗದಂತಹ ವಾತಾವರಣ ನಿರ್ಮಿಸುವುದು ನಿರ್ಮಿಸುವುದು ಎಲ್ಲಾ ಸರ್ಕಾರಗಳ ಜವಾಬ್ದಾರಿ. ಹೀಗಾಗಿ ಈ ನಿರ್ಧಾರವನ್ನು ಅಭಿನಂದಿಸುವುದಾಗಿ ಅಭಿನಂದಿಸುವುದಾಗಿ ದಿನೇಶ್ ಗುಂಡೂರಾವ್ ಹೇಳಿದರು.

<><*<><>*><>

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಭೇಟಿಯ ಸಂದರ್ಭದಲ್ಲಿ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಯ ಬಗ್ಗೆ ಪ್ರಧಾನಿಯವರೊಂದಿಗೆ ಚರ್ಚೆ ಮಾಡಲಾಯಿತು. ಕಳೆದ ಮೂರು ತಿಂಗಳಲ್ಲಿ ರಾಜ್ಯದಲ್ಲಿ ರೈಲ್ವೆ ಅಭಿವೃದ್ಧಿ ಕುರಿತಾಗಿ ತೆಗೆದುಕೊಂಡ ಕ್ರಮಗಳ ಬಗ್ಗೆ ತಿಳಿಸಲಾಯಿತು. ಬೆಂಗಳೂರು ಉಪನಗರ ರೈಲ್ವೆ, ವರ್ತುಲ ರೈಲ್ವೆ ಇತ್ಯಾದಿ ಉಪಕ್ರಮಗಳ ಕುರಿತು ವಿವರಿಸಲಾಯಿತು ಎಂದು ಸೋಮಣ್ಣ ತಿಳಿಸಿದ್ದಾರೆ. ತುಮಕೂರು ರೈಲ್ವೆ ನಿಲ್ದಾಣದ ಅಭಿವೃದ್ಧಿಗೆ ೮೭ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಈ ರೈಲ್ವೆ ನಿಲ್ದಾಣಕ್ಕೆ ಡಾ. ಶಿವಕುಮಾರ್ ಸ್ವಾಮೀಜಿಯವರ ಹೆಸರು ನಾಮಕರಣ ಮಾಡುವಂತೆ ಇದೇ ವೇಳೆ ಮನವಿ ಮಾಡಲಾಯಿತು ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><*<><>*><>

ವಿಶ್ವ ಬಾಹ್ಯಾಕಾಶ ಸಪ್ತಾಹದ ಅಂಗವಾಗಿ ಇಂದು ಚಿಕ್ಕಬಳ್ಳಾಪುರ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಭೌತಶಾಸ್ತ್ರ ವಿಭಾಗದಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಇಸ್ರೋ ಸಂಸ್ಥೆಯ ಟೆಲಿಮ್ಯಾಟ್ರಿಕ್ ಅಂಡ್ ಟ್ರ್ಯಾಕಿಂಗ್ ಸೆಂಟರ್‌ನ ಉಪ ನಿರ್ದೇಶಕಿ, ವಿಜ್ಞಾನಿ ನಂದಿನಿ ಹರಿನಾಥ್ ಮಾತನಾಡಿ, ಇಸ್ರೋದ ಚಂದ್ರಯಾನ ಸಾಧನೆ ಇಡೀ ಜಗತ್ತಿನ ಗಮನ ಸೆಳೆದಿದ್ದು, ಭಾರತೀಯರೆಲ್ಲರೂ ಹೆಮ್ಮೆಪಡುವ ಸಂಗತಿಯಾಗಿದೆ ಎಂದು ಹೇಳಿದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ಇಸ್ರೋ ಮಹತ್ವದ ಸಂಶೋಧನೆಗಳನ್ನು ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಂಶೋಧನೆ, ಪ್ರಯೋಗ ಸಾಧನೆಗಳ ಮೂಲಕ ದೇಶದ ಗೌರವ, ಘನತೆಯನ್ನು ಇನ್ನಷ್ಟು ವೃದ್ಧಿಸುವ ವಿಶ್ವಾಸವಿದೆ. ಬಾಹ್ಯಾಕಾಶ ಕ್ಷೇತ್ರದ ಕೌತುಕಗಳನ್ನು ಕಣ್ತುಂಬಿಕೊಳ್ಳಲು ಮತ್ತು ಮಾಹಿತಿ ಪಡೆಯಲು ಯುವಜನರು ಮುಂದಾಗಬೇಕು ಎಂದರು.

<><*<><>*><>

ಬಾಹ್ಯಾಕಾಶ ವಿಜ್ಞಾನ ಕ್ಷೇತ್ರದಲ್ಲಿ ಭಾರತದ ಅಭಿವೃದ್ಧಿ ಜಗತ್ತಿನ ಇತರೆ ರಾಷ್ಟ್ರಗಳಿಗೆ ಮಾದರಿಯಾಗಿದೆ ಎಂದು ಖಗೋಳ ವಿಜ್ಞಾನಿ ಎಂ.ಬಿ.ಶರಣಪ್ಪ ಹೇಳಿದ್ದಾರೆ.

<><*<><>*><>

ರಾಜ್ಯದ ಉದ್ದಗಲಕ್ಕೂ ಬಡ ಮಕ್ಕಳಿಗೆ ಉಚಿತ ಶಿಕ್ಷಣ, ಊಟ, ಹಾಸ್ಟೆಲ್ ವ್ಯವಸ್ಥೆ ಮತ್ತು ವಿದ್ಯಾರ್ಥಿವೇತನ ನೀಡಿ ಸಮಾಜವನ್ನು ಉತ್ತಮಪಡಿಸುವ ಕೆಲಸವನ್ನು ಚಿತ್ರದುರ್ಗದ ಜಯದೇವ ಗುರುಗಳು ಮಾಡಿದ್ದಾರೆ ಎಂದು ರಾಜ್ಯ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಸ್ಮರಿಸಿದ್ದಾರೆ. ಚಿತ್ರದುರ್ಗದ ಮುರುಘ ಮಠದ ಅನುಭವ ಮಂಟಪದಲ್ಲಿ ಶರಣ ಸಂಸ್ಕೃತಿ ಉತ್ಸವದ ಅಂಗವಾಗಿ ನಡೆದ ಜಯದೇವ ಗುರುಗಳ ೧೫೦ ಸ್ಮರಣಾರ್ಥ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜಯದೇವ ಗುರುಗಳು ಶತಮಾನದ ಹಿಂದೆಯೇ ಸಮಾಜದ ಜನರ ಆರೋಗ್ಯದ ದೃಷ್ಟಿಯಿಂದ ಜಯದೇವ ಹೃದ್ರೋಗ ಆಸ್ಪತ್ರೆಯನ್ನು ನಿರ್ಮಿಸಿ, ಜನರಿಗೆ ಆರೋಗ್ಯ ಭಾಗ್ಯವನ್ನು ಕಲ್ಪಿಸಿದರು. ಬೆಂಗಳೂರು, ಮೈಸೂರು, ಕಲಬುರುಗಿ ಮತ್ತು ಇತರೆ ಜಿಲ್ಲೆಗಳಲ್ಲಿ ಹೃದ್ರೋಗ ಆಸ್ಪತ್ರೆಗಳನ್ನು ತರೆಯುವಲ್ಲಿ ಸರ್ಕಾರಕ್ಕೆ ಸಹಕರಿಸಿದರು ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>